**All India Radio: Bangalore**
**National Bulletin In Kannada**
**12.03.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.03.2025  19.35 p.m.**

**<><><><>**

ಮುಖ್ಯಾಂಶಗಳು

- ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮಾರಿಷಸ್‌ನ ಅತ್ಯುನ್ನತ ರಾಷ್ಟ್ರೀಯ ಪ್ರಶಸ್ತಿ ಪ್ರದಾನ
- ದೇಶದ ೭೭೩ ಜಿಲ್ಲೆಗಳಲ್ಲಿ ಇದೀಗ ೫-ಜಿ ತಂತ್ರಜ್ಞಾನ ಸೇವೆ ಲಭ್ಯ : ಕೇಂದ್ರ ಸರ್ಕಾರದಿಂದ ಮಾಹಿತಿ
- ಲೋಕಸಭೆಯಲ್ಲಿಂದು ತೈಲಕ್ಷೇತ್ರಗಳ ನಿಯಂತ್ರಣ ತಿದ್ದುಪಡಿ ಮಸೂದೆ -೨೦೨೪ ಮಂಡನೆ
- ಆಲ್ ಇಂಗ್ಲೆಂಡ್ ಓಪನ್ ಚಾಂಪಿಯನ್ ಶಿಪ್ ಬ್ಯಾಡ್ಮಿಂಟನ್ : ಮಿಶ್ರ ಡಬಲ್ಸ್‌ನಲ್ಲಿ ಭಾರತದ ರೋಹನ್-ಋತ್ವಿಕಾ ಜೋಡಿ ಪ್ರಿ ಕ್ವಾರ್ಟರ್ ಫೈನಲ್ ಪ್ರವೇಶ

<><><><>

ಮಾರಿಷಸ್‌ನ ಚ್ಯಾಂಪ್ ಡೇ ಮಾರ್ಸ್‌ನಲ್ಲಿ ಇಂದು ನಡೆದ ಮಾರಿಷಸ್‌ನ ರಾಷ್ಟ್ರೀಯ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ಮುಖ್ಯ ಅತಿಥಿಯಾಗಿ ಭಾಗವಹಿಸಿದರು. ಈ ವೇಳೆ ಭಾರತ-ಮಾರಿಷಸ್ ನಡುವಿನ ಸಂಬಂಧಗಳ ಬಲವರ್ಧನೆಗೆ ನೀಡಿದ ಕೊಡುಗೆಗಾಗಿ ಮಾರಿಷಸ್ ಅಧ್ಯಕ್ಷ ಧರ್ಮಬೀರ್ ಗೋಕುಲ್, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮಾರಿಷಸ್‌ನ ಅತ್ಯುನ್ನತ ನಾಗರಿಕ ಪ್ರಶಸ್ತಿ 'ಗ್ರ್ಯಾಂಡ್ ಕಮಾಂಡರ್ ಆಫ್ ದಿ ಆರ್ಡರ್ ಆಫ್ ದಿ ಸ್ಟಾರ್ ಅಂಡ್ ಕೀ ಆಫ್ ಇಂಡಿಯನ್ ಓಷಿಯನ್' ಅನ್ನು ಪ್ರದಾನ ಮಾಡಿದರು. ಮಾರಿಷಸ್‌ನ ಅತ್ಯುನ್ನತ ಪ್ರಶಸ್ತಿಯನ್ನು ತಮಗೆ ಪ್ರದಾನ ಮಾಡಿದ್ದಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಧನ್ಯವಾದ ತಿಳಿಸಿದರು.

**ಧ್ವನಿ : ಪಿಎಂ ಮೋದಿ (೨೪ ಸೆಕೆಂಡ್‌ಗಳು)**

ಈ ವೇಳೆ ನಡೆದ ಪರೇಡ್‌ನಲ್ಲಿ ಭಾರತೀಯ ನೌಕಾಪಡೆಯ ತುಕಡಿ ಭಾಗವಹಿಸಿತು. ಕಾರ್ಯಕ್ರಮದಲ್ಲಿ ಯುವ ವಿನಿಮಯ ಕಾರ್ಯಕ್ರಮದಡಿ ಎನ್‌ಸಿಸಿ ಕೆಡೆಟ್‌ಗಳು ಸಹ ಭಾಗವಹಿಸಿದ್ದರು. ಇದಕ್ಕೂ ಮೊದಲು ಪ್ರಧಾನಿ ನರೇಂದ್ರ ಮೋದಿ, ಮಾರಿಷಸ್ ಪ್ರಧಾನಿ ನಿಯೋಗ ಮಟ್ಟದ ಮಾತುಕತೆ ನಡೆಸಿದರು. ಈ ವೇಳೆ ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ಪಾಲುದಾರಿಕೆಯನ್ನು ಪರಿಶೀಲಿಸಲಾಯಿತು. ಮಾರಿಷಸ್ ರಾಷ್ಟ್ರೀಯ ಸಂಸತ್ತಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಭಯ ನಾಯಕರು, ಭಾರತ ಅನುದಾನಿತ ಪ್ರದೇಶ ಆರೋಗ್ಯ ಕೇಂದ್ರವನ್ನು ಹಾಗೂ ೨೦ ಹೆಚ್ಚಿನ ಪ್ರಭಾವವುಳ್ಳ ಸಮುದಾಯ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದರು. ಇದಲ್ಲದೇ ಆರ್ಥಿಕ ಅಪರಾಧ ತಡೆಗಟ್ಟುವಿಕೆ, ಸಾರ್ವಜನಿಕ ಸೇವಾ ಸಾಮರ್ಥ್ಯ ನಿರ್ಮಾಣ, ಕಡಲ ಭದ್ರತೆ, ಸ್ಥಳೀಯ ಕರೆನ್ಸಿ ವ್ಯಾಪಾರ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಸಂಬಂಧಿಸಿದ ೮ ತಿಳಿವಳಿಕಾ ಒಪ್ಪಂದಗಳಿಗೆ ಸಹಿ ಹಾಕಲಾಯಿತು. ಇದೇ ವೇಳೆ ಪ್ರಧಾನಿ, ಮಾರಿಷಸ್‌ನ ಹೊಸ ಸಂಸತ್ ಭವನ ನಿರ್ಮಾಣಕ್ಕೆ ಹಾಗೂ ಸಮುದಾಯ ಅಭಿವೃದ್ಧಿ ಯೋಜನೆಗಳ ೨ನೇ ಹಂತಕ್ಕೆ ಭಾರತದ ನೆರವನ್ನು ಘೋಷಿಸಿ ಮಾರಿಷಸ್ ಅಭಿವೃದ್ಧಿಗೆ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದರು. ಇದರ ಜೊತೆಗೆ ಉಭಯ ನಾಯಕರು, ಅಟಲ್ ಬಿಹಾರಿ ವಾಜಪೇಯಿ, ಸಾರ್ವಜನಿಕ ಸೇವೆ ಮತ್ತು ನಾವೀನ್ಯತಾ ಸಂಸ್ಥೆಯನ್ನು ಉದ್ಘಾಟಿಸಿದರು. ತಮ್ಮ ಎರಡು ದಿನಗಳ ಮಾರಿಷಸ್ ಭೇಟಿ ಭಾಗವಾಗಿ ಪ್ರಧಾನಿ, ಮಾರಿಷಸ್‌ನ ಪುಣ್ಯಸ್ಥಾನವಾದ ಗಂಗಾತಲಾವ್‌ನಲ್ಲಿ ಪ್ರಾರ್ಥನೆ ಸಲ್ಲಿಸಿ ಪ್ರಯಾಗ್‌ರಾಜ್ ಕುಂಭಮೇಳ ತ್ರಿವೇಣಿ ಸಂಗಮದ ಪವಿತ್ರ ನೀರನ್ನು ಸಮರ್ಪಿಸಿದರು. ತಮ್ಮ ಭೇಟಿಯ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಪ್ರಧಾನಿ, ಮಾರಿಷಸ್‌ನ ರಾಷ್ಟ್ರೀಯ ದಿನಾಚರಣೆಯ ವಿಶೇಷ ಸಂದರ್ಭದಲ್ಲಿ ಮಾರಿಷಸ್ ಪ್ರಧಾನಿ ನವೀನ್ ಚಂದ್ರ ರಾಮಗೂಲಮ್ ಅವರೊಂದಿಗೆ ಉಭಯ ರಾಷ್ಟ್ರಗಳ ನಡುವಿನ ಸಂಬಂಧಗಳ ಕುರಿತು ವಿಸ್ತೃತ ಚರ್ಚೆ ನಡೆಸಲಾಗಿದೆ. ಇದರ ಜೊತೆಗೆ ಕೃತಕಬುದ್ಧಿಮತ್ತೆ, ಸಾಮರ್ಥ್ಯ ವರ್ಧನೆ, ಸುಸ್ಥಿರ ಬೆಳವಣಿಗೆಯಂತಹ ಕ್ಷೇತ್ರಗಳಲ್ಲಿ ಪಾಲುದಾರಿಕೆಯನ್ನು ವಿಸ್ತರಿಸುವ ಕುರಿತಂತೆ ಚರ್ಚೆ ನಡೆದಿದೆ ಎಂದಿದ್ದಾರೆ.

<><><><>

ಇಪ್ಪತ್ತೊಂದು ರಾಷ್ಟ್ರಗಳ ಅತ್ಯುನ್ನತ ನಾಗರಿಕ ಪ್ರಶಸ್ತಿಗಳನ್ನು ಪಡೆದಿರುವ ಪ್ರಧಾನಿ ನರೇಂದ್ರ ಮೋದಿ ಜಗತ್ತು ಕಂಡ ಅನನ್ಯ ನಾಯಕ ಎಂದು ಬಿಜೆಪಿ ಬಣ್ಣಿಸಿದೆ. ಸಂಸತ್ತಿನ ಆವರಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಪಕ್ಷದ ವಕ್ತಾರ, ಸುಧಾಂಶು ತ್ರಿವೇದಿ, ೨೧ ದೇಶಗಳಲ್ಲಿ ಈಜಿಪ್ಟ್, ಯುಎಇ, ಬಹ್ರೇನ್ ಮತ್ತು ಅಫ್ಘಾನಿಸ್ತಾನ್ ಸೇರಿದಂತೆ ೯ ರಾಷ್ಟ್ರಗಳು ಇಸ್ಲಾಂ ರಾಷ್ಟ್ರಗಳಾಗಿವೆ. ಇಂದು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮಾರಿಷಸ್‌ನ ಅತ್ಯುನ್ನತ ರಾಷ್ಟ್ರೀಯ ಪ್ರಶಸ್ತಿಯನ್ನು ಪ್ರದಾನ ಮಾಡಲಾಗಿರುವುದು, ವಿವಿಧ ದೇಶಗಳೊಂದಿಗೆ ಭಾರತದ ಸಂಬಂಧ ಆರ್ಥಿಕ ಮಿಲಿಟರಿ ಮತ್ತು ರಾಜತಾಂತ್ರಿಕ ಅಂಶಗಳನ್ನು ಮೀರಿದುದ್ದಾಗಿದೆ ಎಂಬುದನ್ನು ಎತ್ತಿ ತೋರಿಸುತ್ತದೆ ಎಂದು ಹೇಳಿದರು.

<><><><>

ದೇಶದ ೭೭೬ ಜಿಲ್ಲೆಗಳಲ್ಲಿ ೭೭೩ ಜಿಲ್ಲೆಗಳಲ್ಲಿ ೫ಜಿ ತಂತ್ರಜ್ಞಾನದ ಸೇವೆ ಲಭ್ಯವಿದೆ ಎಂದು ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು ಲಿಖಿತ ಉತ್ತರ ನೀಡಿದ ಕೇಂದ್ರ ಸಂವಹನ ಖಾತೆ ರಾಜ್ಯ ಸಚಿವ ಪೆಮ್ಮಸಾನಿ ಚಂದ್ರಸೇಖರ್, ದೇಶದಲ್ಲಿ ೫ಜಿ ಸೇವೆಯನ್ನು ವಿಸ್ತರಿಸಲು ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ. ದೂರಸಂಪರ್ಕ ಸೇವಾ ಪೂರೈಕೆದಾರರಿಂದ ಇಲ್ಲಿಯವರೆಗೆ ೪.೬೯ ಲಕ್ಷ ೫ಜಿ ಬೇಸ್ ಟ್ರಾನ್ಸಿವರ್‌ಗಳನ್ನು ಸ್ಥಾಪಿಸಲಾಗಿದೆ. ದೇಶಾದ್ಯಂತ ಎಲ್ಲ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ೫ಜಿ ಸೇವೆ ಲಭ್ಯವಿದೆ ಎಂದು ಅವರು ತಿಳಿಸಿದರು.

<><><><>

ಲೋಕಸಭೆಯಲ್ಲಿಂದು ತೈಲ ಕ್ಷೇತ್ರಗಳ ನಿಯಂತ್ರಣ ಮತ್ತು ಅಭಿವೃದ್ಧಿ ತಿದ್ದುಪಡಿ ಮಸೂದೆ - ೨೦೨೪ ಅನ್ನು ಅಂಗೀಕಾರಕ್ಕಾಗಿ ಮಂಡಿಸಲಾಗಿದೆ. ಈ ಕಾಯ್ದೆ ೧೯೪೮ರ ತೈಲ ಕ್ಷೇತ್ರಗಳ ನಿಯಂತ್ರಣ ಮತ್ತು ಅಭಿವೃದ್ಧಿ ಮಸೂದೆಗೆ ತಿದ್ದುಪಡಿ ತರುವ ಗುರಿ ಹೊಂದಿದೆ. ಮಸೂದೆಯನ್ನು ಮಂಡಿಸಿದ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ, ಭಾರತ ವಿಶ್ವದ ೫ನೇ ಅತಿದೊಡ್ಡ ಆರ್ಥಿಕತೆಯಾಗಿದೆ ಹಾಗೂ ೨೦೨೭ರ ವೇಳೆಗೆ ೩ನೇ ಅತಿದೊಡ್ಡ ಆರ್ಥಿಕತೆಯಾಗಲಿದೆ. ಆರ್ಥಿಕ ಬೆಳವಣಿಗೆ ಇಂಧನದ ಉತ್ತಮ ಬಳಕೆಯ ಮೇಲೆ ಅವಲಂಬಿತವಾಗಿದೆ ಎಂದು ಮಾಹಿತಿ ನೀಡಿದರು. ಭಾರತ ಪ್ರತಿದಿನ ೫.೫ ದಶಲಕ್ಷ ಬ್ಯಾರೆಲ್ ಕಚ್ಚಾತೈಲವನ್ನು ಬಳಸುತ್ತಿದ್ದು, ಅಪಾರವಾದ ಹೈಡ್ರೋ ಕಾರ್ಬನ್ ಸಂಪನ್ಮೂಲ ಸಾಮರ್ಥ್ಯ ಹೊಂದಿದೆ ಎಂದು ಸಚಿವರು ಹೇಳಿದರು. ಮಸೂದೆ ಕುರಿತು ಮಾತನಾಡಿದ ಕಾಂಗ್ರೆಸ್‌ನ ಮನೀಷ್

ತಿವಾರಿ, ೨೦೧೪-೧೫ರಲ್ಲಿ ದೇಶದ ಕಚ್ಚಾ ಮತ್ತು ನೈಸರ್ಗಿಕ ಅನಿಲ ಉತ್ಪಾದನಾ ಪ್ರಮಾಣ ೩೭.೪೬ ದಶಲಕ್ಷ ಮೆಟ್ರಿಕ್ ಟನ್ ಆಗಿತ್ತು ಹಾಗೂ ೧೮೯.೪೩ ದಶಲಕ್ಷ ಮೆಟ್ರಿಕ್ ಟನ್ ಕಚ್ಚಾ ತೈಲವನ್ನು ಆಮದು ಮಾಡಿಕೊಳ್ಳಲಾಗುತ್ತಿತ್ತು. ೨೦೨೩-೨೪ರಲ್ಲಿ ಇದರ ಉತ್ಪಾದನಾ ಪ್ರಮಾಣ ೨೯.೪ ದಶಲಕ್ಷ ಮೆಟ್ರಿಕ್ ಟನ್‌ಗೆ ಇಳಿದಿದ್ದು, ಆಮದು ಪ್ರಮಾಣ ೨೪೩.೩ ದಶಲಕ್ಷ ಮೆಟ್ರಿಕ್ ಟನ್ ಏರಿಕೆಯಾಗಿದೆ ಎಂದರು. ೨೦೨೩-೨೪ರಲ್ಲಿ ದೇಶದ ಸುಮಾರು ಶೇಕಡ ೮೭ರಷ್ಟು ಕಚ್ಚಾತೈಲ ಹಾಗೂ ನೈಸರ್ಗಿಕ ಅನಿಲವನ್ನು ಆಮದು ಮಾಡಿಕೊಳ್ಳಲಾಗಿದೆ ಎಂದ ಅವರು, ಆಮದಿನ ಮೇಲಿನ ಅವಲಂಬನೆಯನ್ನು ಕಡಿಮೆಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು ಪ್ರಶ್ನಿಸಿದರು. ಹೋಳಿ ಹಬ್ಬದ ಹಿನ್ನೆಲೆ ಲೋಕಸಭಾ ಕಲಾಪವನ್ನು ಸೋಮವಾರಕ್ಕೆ ಮುಂದೂಡಲಾಗಿದೆ.

<><><><>

ಕಳೆದ ೧೦ ವರ್ಷಗಳಲ್ಲಿ ದೇಶದ ಹಾಲು ಉತ್ಪಾದನಾ ಪ್ರಮಾಣ ಶೇಕಡ ೬೩.೫ರಷ್ಟು ಗಮನಾರ್ಹ ಬೆಳವಣಿಗೆ ಕಂಡಿದ್ದು, ೨೩೯ ದಶಲಕ್ಷ ಟನ್‌ಗೆ ತಲುಪಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಕುರಿತಂತೆ ರಾಜ್ಯಸಭೆಯಲ್ಲಿಂದು ಪೂರಕ ಪ್ರಶ್ನೆಗಳಿಗೆ ಉತ್ತರಿಸುತ್ತಾ ಮಾಹಿತಿ ನೀಡಿದ ಕೇಂದ್ರ ಮೀನುಗಾರಿಕೆ ಮತ್ತು ಪಶು ಸಂಗೋಪನೆ ಸಚಿವ ರಾಜೀವ್ ರಂಜನ್ ಸಿಂಗ್, ೨೦೧೪ರವರೆಗೆ ದೇಶದ ಹಾಲು ಉತ್ಪಾದನಾ ಪ್ರಮಾಣ ೧೪೬ ದಶಲಕ್ಷ ಟನ್‌ಗಳಷ್ಟಿತ್ತು.

<><><><>

ಬರ್ಮಿಂಗ್ ಹ್ಯಾಮ್‌ನಲ್ಲಿ ನಡೆಯುತ್ತಿರುವ ಆಲ್ ಇಂಗ್ಲೆಂಡ್ ಓಪನ್ ಚಾಂಪಿಯನ್ ಶಿಪ್ ಬ್ಯಾಡ್ಮಿಂಟನ್ ಟೂರ್ನಿಯ ಮಿಶ್ರ ಡಬಲ್ಸ್ ವಿಭಾಗದಲ್ಲಿ ಭಾರತದ ರೋಹನ್ ಕಪೂರ್ ಹಾಗೂ ಋತ್ವಿಕಾ ಗಡ್ಡೆ ಜೋಡಿ ಪ್ರಿ ಕ್ವಾಟರ್ ಫೈನಲ್ ಪ್ರವೇಶಿಸಿದೆ. ಇಂದು ನಡೆದ ಪಂದ್ಯದಲ್ಲಿ ಭಾರತದ ಜೋಡಿ ಚೀನಾದ ಯೆ ಹಾಂಗ್ ವಿ ಮತ್ತು ನಿಕೋಲ್ ಗೊಂಜಲೆಸ್ ಚ್ಯಾನ್ ಜೋಡಿಯನ್ನು ೨೧-೧೦, ೧೭-೨೧, ೨೪-೨೨ ಸೆಟ್‌ಗಳ ಅಂತರದಲ್ಲಿ ಮಣಿಸಿದೆ. ಇಂದು ನಡೆಯಲಿರುವ ಮತ್ತೊಂದು ಮಿಶ್ರ ಡಬಲ್ಸ್ ಪಂದ್ಯದಲ್ಲಿ ಭಾರತದ ಧ್ರುವ್ ಕಪಿಲಾ ಹಾಗೂ ತನಿಶಾ ಕ್ರಾಸ್ಟೋ ಜೋಡಿ ಕಣಕ್ಕಿಳಿಯಲಿದ್ದು, ಮಹಿಳೆಯರ ಸಿಂಗಲ್ಸ್ ವಿಭಾಗದ ಪಂದ್ಯದಲ್ಲಿಂದು ಎರಡು ಬಾರಿ ಒಲಿಂಪಿಕ್ ಪದಕ ವಿಜೇತೆ ಭಾರತದ ಪಿ.ವಿ. ಸಿಂಧು, ದಕ್ಷಿಣ ಕೋರಿಯಾದ ಕಿಮ್ ಗಾ ಯ್ಯೂನ್ ಅವರನ್ನು ಎದುರಿಸಲಿದ್ದಾರೆ. ಮಹಿಳಾ ಡಬಲ್ಸ್ ವಿಭಾಗದಲ್ಲಿ ತ್ರೀಶಾ ಜಾಲಿ ಹಾಗೂ ಗಾಯತ್ರಿ ಗೋಪಿಚಂದ್ ಜೋಡಿ ತಮ್ಮ ಮೊದಲ ಪಂದ್ಯದಲ್ಲಿ ಸ್ಪರ್ಧಿಸುತ್ತಿದ್ದರೆ, ಮತ್ತೊಂದು ಮಹಿಳಾ ಜೋಡಿ ಪ್ರಿಯಾ

ಕೊಂಜೆಂಗ್ ಬಾನ್ ಹಾಗೂ ಶೃತಿ ಮಿಶ್ರಾ ದಕ್ಷಿಣ ಕೋರಿಯಾ ತಂಡವನ್ನು ಎದುರಿಸಲಿದ್ದಾರೆ. ೭ನೇ ಶ್ರೇಯಾಂಕಿತ ಪುರುಷರ ಡಬಲ್ಸ್ ಜೋಡಿಯಾದ ಸಾತ್ವಿಕ್ ಸಾಯಿರಾಜ್ ರಾಂಕಿ ರೆಡ್ಡಿ ಹಾಗೂ ಚಿರಾಗ್ ಶೆಟ್ಟಿ ಜೋಡಿ ಸಹ ಇಂದು ಕಣಕ್ಕಿಳಿಯುತ್ತಿದೆ.

<><><><>

ಮಹಿಳಾ ಪ್ರಿಮಿಯರ್ ಲೀಗ್ ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಲೀಗ್ ಹಂತದ ಪಂದ್ಯಗಳು ನಿನ್ನೆ ಮುಕ್ತಾಯಗೊಂಡಿದ್ದು, ನಾಳೆ ಮುಂಬೈನ ಬ್ರಬಾರ್ನ್ ಕ್ರೀಡಾಂಗಣದಲ್ಲಿ ನಡೆಯಲಿರುವ ಪ್ಲೇಆಫ್ ಹಂತದ ಮೊದಲನೇ ಎಲಿಮಿನೇಟರ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ.  ಪಂದ್ಯ ನಾಳೆ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>